5768(6572) ಶ್ರೀ ದೊಡ್ಡನಗೌಡ ಗುಂಡನಗೌಡ ಪಾಟೀಲ್ (ಹುನಗುಂದ): ಮಾನ್ಯ ವೈದ್ಯಕೀಯ ಶಿಕ್ಷಣ ಸಚಿವರು ಈ ಕೆಳಗಿನ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಜ್ಯದಲ್ಲಿ ಪ್ರಸಕ್ತ ಸಾಲಿನಿಂದ ಯಾವ ಯಾವ ಸ್ಥಳಗಳಲ್ಲಿ ವೈದ್ಯಕೀಯ ಮತ್ತು ದಂತ ವೈದ್ಯಕೀಯ ಮಹಾವಿದ್ಯಾಲಯಗಳನ್ನು ಪ್ರಾರಂಭಿಸಲು ಸರ್ಕಾರ ಘೋಷಣೆ ಮಾಡಿದೆ.

ಆ) ಇದಕ್ಕಾಗಿ ಸರ್ಕಾರ ಯಾವ ಕ್ರಮಗಳನ್ನು ಕೈಗೊಂಡಿದೆ.

ಇ) ಪ್ರತಿಯೊಂದು ಈ ಮಹಾವಿದ್ಯಾಲಯದ ಬೋಧನೆಗಾಗಿ ಯಾವ ಯಾವ ವಿಷಯದ ಬೋಧಕರ ಹುದ್ದೆಗಳ ನೇಮಕಾತಿಗಾಗಿ ಅಗತ್ಯ ಕ್ರಮ ಕೈಗೊಂಡಿದೆ:

ಈ) ಈ ಕ್ರಮ ಯಾವ ಹಂತದಲ್ಲಿದೆ:

ಉ) ಈ ಮಹಾವಿದ್ಯಾಲಯಗಳ ಬೋಧಕೇತರ ಸಿಬ್ಬಂದಿ ಎಷ್ಟು ಹಾಗೂ ಈ ಸಿಬ್ಬಂದಿ ನೇಮಕಾತಿಗಾಗಿ ಸರ್ಕಾರ ಯಾವ ಕ್ರಮವನ್ನು ಕೈಗೊಂಡಿದೆ:

ಊ) ವೈದ್ಯಕೀಯ ಮತ್ತು ದಂತ ವೈದ್ಯಕೀಯ ವೈದ್ಯಾಧಿಕಾರಿ ಯಾಗಲು ಓರ್ವ ಅಭ್ಯರ್ಥಿಗೆ ಸರ್ಕಾರ ಖರ್ಚು ಮಾಡುವ ಹಣದ ಮೊತ್ತವೆಷ್ಟು:

ಶ್ರೀ ಇಕ್ಬಾಲ್ ಅನ್ಸಾರಿ (ವೈದ್ಯಕೀಯ ಶಿಕ್ಷಣ ಸಚಿವರು)

ಅ) ವೈದ್ಯಕೀಯ ಕಾಲೇಜುಗಳು. ಬೆಳಗಾಂ, ಮಂಡ್ಯ, ಹಾಸನ, ರಾಯಚೂರು, ಬೀದರ್ ಮತ್ತು ಶಿವಮೊಗ್ಗ.

ಆ) ಮೇಲ್ಕಂಡ ಆರು ಜಿಲ್ಲಾ ಆಸ್ಪತ್ರೆಗಳನ್ನು ಬೋಧನಾ ಆಸ್ಪತ್ರೆಗಳನ್ನಾಗಿ ಪರಿವರ್ತಿಸಲಾಗಿದೆ. ಈ ಸಂಸ್ಥೆಗಳನ್ನು ಸ್ವಾಯತ್ತ ಸಂಸ್ಥೆಗಳನ್ನಾಗಿ ನೊಂದಾಯಿಸಿದೆ. 2005–06ನೇ ಸಾಲಿನ ಆಯವ್ಯಯದಲ್ಲಿ ಕಟ್ಟಡಗಳ ನಿರ್ಮಾಣ ಕಾಮಗಾರಿಗಳಿಗಾಗಿ 30 ಕೋಟಿ ರೂಪಾಯಿಗಳನ್ನು ಒದಗಿಸಲಾಗಿದೆ, ಕಾಮಗಾರಿಗಳು ಪ್ರಗತಿಯಲ್ಲಿವೆ. ಸಿಬ್ಬಂದಿ ನೇಮಕಾತಿಯನ್ನು ಮಾಡಲಾಗುತ್ತಿದೆ.

ಇ) ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳ ಇಲಾಖೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ವೈದ್ಯರನ್ನು ನಿಯೋಜನೆ ಮೇಲೆ ನೇಮಿಸಲಾಗುತ್ತಿದೆ. ಪ್ರಾಧ್ಯಾಪಕರು ಸಹ ಪ್ರಾಧ್ಯಾಪಕರು ಹುದ್ದೆಗಳಿಗೆ ನೇರೆ ನೇಮಕಾತಿ ಮೂಲಕ ನೇಮಕಾತಿ ಮಾಡಲಾಗುತ್ತಿದೆ.

ಈ) ಬೆಳಗಾಂ, ಮಂಡ್ಯ ಮತ್ತು ಹಾಸನ ವೈದ್ಯಕೀಯ ಕಾಲೇಜುಗಳಿಗೆ ಸಂದರ್ಶನವಾಗಿ ಆಯ್ಕೆಯಾದವರಿಗೆ ಕಾಲೇಜಿನ ಪ್ರಾಂಶುಪಾಲರು : ನಿರ್ದೇಶಕರು ನೇಮಕಾತಿ ಆದೇಶವನ್ನು ಹೊರಡಿಸಲು ಕ್ರಮ ತೆಗೆದುಕೊಂಡಿದ್ದಾರೆ.

ಉ) ಸಂಬಂಧಿಸಿದ ಜಿಲ್ಲಾ ಆಸ್ಪತ್ರೆಗಳಿಂದ ಬೋಧಕೇತರ ಸಿಬ್ಬಂದಿಗಳನ್ನು ಹೊಸ ವೈದ್ಯಕೀಯ ಮಹಾವಿದ್ಯಾಲಯಗಳಲ್ಲಿ ಉಪಯೋಗಿಸಿಕೊಳ್ಳಲು ಕ್ರಮ ಕೈಗೊಳ್ಳಲಾಗುತ್ತಿದೆ. ಹಾಗೂ ಕೊರತೆಯಾದಲ್ಲಿ ಕಾಲೇಜಿನ ಸ್ವಾಯತ್ತ ಸಂಸ್ಥೆಯವರು ನೇಮಕ ಮಾಡಲು ಅವಕಾಶವಿರುತ್ತದೆ. ಜಿಲ್ಲಾ ಆಸ್ಪತ್ರೆಯಲ್ಲಿ ಸೇವಾನಿರತರಾದವರನ್ನು ಮುಂದುವರೆಸಲಾಗುತ್ತಿದೆ.

ಊ) ನಿಷ್ಕರ್ಷೆಯಾಗಿಲ್ಲ.